ಆಯುಕ್ತರ ಕಛೇರಿ
ಪೌರಾಡಳಿತ ನಿರ್ದೇಶನಾಲಯ

ಕರ್ನಾಟಕ ಸರ್ಕಾರ

ದೂರವಾಣಿ:080- 22867172 / 22866302
ಫ್ಯಾಕ್ಸ್: 080-22863576 / 22861665
Email: dmablr@yahoo.co.in
9ನೇ ಮಹಡಿ, ವಿಶ್ವೇಶ್ವರಯ್ಯ ಗೋಪುರ,
ಡಾ|| ಅಂಬೇಡ್ಕರ್ ವೀಧಿ, ಬೆಂಗಳೂರು
560001.

ಸಂಖ್ಯೆ: ಪೌನಿ/ಘವನಿ/ಲೋಕ್‌ಅದಾಲತ್/ಸಿಆರ್ –10/2010–11

ದಿನಾಂಕ 06–02–2012

ರವರಿಗೆ,

1) ಯೋಜನಾ ನಿರ್ದೇಶಕರುಗಳಿಗೆ
   ಎಲ್ಲಾ ಜಿಲ್ಲಾ ನಗರಾಭಿವೃದ್ಧಿ ಕೋಶಗಳು
2) ಆಯುಕ್ತರು, ಎಲ್ಲಾ ಮಹಾನಗರಪಾಲಿಕೆಗಳು (ಬಿ.ಬಿ.ಎಂ.ಪಿ. ಹೊರತುಪಡಿಸಿ)
3) ಪೌರಾಯುಕ್ತರು, ಎಲ್ಲಾ ನಗರಸಭೆಗಳು
4) ಮುಖ್ಯಾಧಿಕಾರಿಗಳು, ಎಲ್ಲಾ ಪುರಸಭೆಗಳು, ಪಟ್ಟಣ ಪಂಚಾಯಿತಿಗಳು
   ಮತ್ತು ಅಧಿಸೂಚಿತ ಪ್ರದೇಶ ಸಮಿತಿಗಳು

ಮಾನ್ಯರೇ,

ವಿಷಯ: ನಗರಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಮೂಲದಲ್ಲಿಯೇ ತ್ಯಾಜ್ಯ ವಸ್ತುಗಳ ವಿಂಗಡಣೆ ಹಾಗೂ ಅವುಗಳ ಸಮರ್ಪಕ ನಿರ್ವಹಣೆ ಮಾಡುವ ಕುರಿತು.

ಉಲ್ಲೇಖ: 1) ಮಾನ್ಯ ಲೋಕ್ ಅದಾಲತ್ ನ್ಯಾಯಾಲಯವು W.P. No. 13474/1998/ C/W/33645/1998 (PIL)
2) ಈ ಕಛೇರಿಯ ಸುತ್ತೋಲೆ ಸಂಖ್ಯೆ:ಪೌನಿ:ನಿನ:ಘವನಿ:27/2004–05, ದಿನಾಂಕ 08–04–2008
3) ಈ ಕಛೇರಿಯ ಸುತ್ತೋಲೆ ಸಂಖ್ಯೆ: ಪೌನಿ:ಘವನಿ:ಎಸ್.ಎಚ್.ಜಿ./ಸಿಆರ್ 13/08–09, ದಿನಾಂಕ 07–09–2009
4) ಈ ಕಛೇರಿಯ ಸುತ್ತೋಲೆ ಸಂಖ್ಯೆ: ಪೌನಿ/ಘವನಿ/ಲೋಕ್‌ಅದಾಲತ್/ಸಿಆರ್ –10/2010–11, ದಿನಾಂಕ 14–09–2011

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ಲೋಕ್‌ಅದಾಲತ್ ನ್ಯಾಯಾಲಯವು ಉಲ್ಲೇಖ (1)ರಲ್ಲಿ ನಮೂದಿಸಲಾಗಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಗೆ ಸಂಬಂಧಿಸಿದಂತೆ ದಿನಾಂಕ 30–09–2011ರಂದು ನೀಡಿರುವ ಆದೇಶದಲ್ಲಿ, ಮೂಲದಲ್ಲಿಯೇ ತ್ಯಾಜ್ಯ ವಸ್ತುಗಳನ್ನು ಕನಿಷ್ಟ ಪಕ್ಷ ಎರಡು ಬಗೆಗಳಲ್ಲಿ ಅಂದರೆ ಹಸಿಕಸ ಹಾಗೂ ಒಣಕಸ ಎಂದು ವಿಂಗಡಿಸುವ ಬಗ್ಗೆ ಹೆಚ್ಚು ಒತ್ತು ನೀಡಲು ಮತ್ತು ಈ ಕೆಲಸಕ್ಕಾಗಿ ಚಿಂದಿ ಆಯುವವರನ್ನು ಹಾಗೂ ಸ್ವಸಹಾಯ ಗುಂಪುಗಳನ್ನು ತೊಡಗಿಸಲು ಸೂಚಿಸಿರುತ್ತಾರೆ. ಹಾಗೆಯೇ, ಮೂಲದಲ್ಲಿಯೇ ತ್ಯಾಜ್ಯ ವಸ್ತುಗಳ ವಿಂಗಡಣೆಗಾಗಿ ಬೇಕಾದ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸಿ, ಪುನರ್ಬಳಸಬಹುದಾದ ತ್ಯಾಜ್ಯ ವಸ್ತುಗಳನ್ನು ಮತ್ತು ಇತರೆ ತ್ಯಾಜ್ಯ ವಸ್ತುಗಳನ್ನು ಪ್ರತ್ಯೇಕವಾಗಿ ಸಂಸ್ಕರಿಸಲು ಹಾಗೂ ಪುನರ್ಬಳಸಬಹುದಾದ ತ್ಯಾಜ್ಯ ವಸ್ತುಗಳನ್ನು ಆರ್ಥಿಕ ಸಂಪನ್ಮೂಲವನ್ನಾಗಿ ಪರಿವರ್ತಿಸಲು ಆದೇಶ ನೀಡಿರುತ್ತಾರೆ. ಮಾನ್ಯ ಲೋಕ್ ಅದಾಲತ್ ನ್ಯಾಯಾಲಯವು ನಗರಸ್ಥಳೀಯ ಸಂಸ್ಥೆಗಳಲ್ಲಿ ಕೈಗೊಳ್ಳಲಾಗುತ್ತಿರುವ ಕ್ರಮಗಳ ಬಗ್ಗೆ ಹಾಗೂ ಈ ನಿಟ್ಟಿನಲ್ಲಿ ಸಾಧಿಸಿರುವ ಪ್ರಗತಿ ಬಗ್ಗೆ ಕಾಲಕಾಲಕ್ಕೆ ಪರಿಶೀಲನೆ ನಡೆಸುತ್ತಿದೆ.

ನಗರಸ್ಥಳೀಯ ವ್ಯಾಪ್ತಿಯಲ್ಲಿ ಸಮಗ್ರ ತ್ಯಾಜ್ಯ ವಸ್ತುಗಳ ನಿರ್ವಹಣೆ ಕುರಿತಾಗಿ ಪೌರಾಡಳಿತ ನಿರ್ದೇಶನಾಲಯದಿಂದ ಈಗಾಗಲೇ ಹೊರಡಿಸಲಾಗಿರುವ ಉಲ್ಲೇಖ (2) ಮತ್ತು (4)ರ ಸುತ್ತೋಲೆಗಳಲ್ಲಿ, ನಗರಸ್ಥಳೀಯ

ಸಂಸ್ಥೆಗಳು ಮೂಲದಲ್ಲಿಯೇ ತ್ಯಾಜ್ಯ ವಸ್ತುಗಳ ವಿಂಗಡಣೆ ಕುರಿತಾಗಿ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುವ ಬಗ್ಗೆ ನಿರ್ದೇಶನಗಳನ್ನು ನೀಡಲಾಗಿರುತ್ತದೆ. ಆದರೆ ಈ ಕುರಿತು ನಗರಸ್ಥಳೀಯ ಸಂಸ್ಥೆಗಳಲ್ಲಿ ಸಾಧಿಸಿರುವ ಪ್ರಗತಿ ನಿರಾಶಾದಾಯಕವಾಗಿರುತ್ತದೆ. ಇದನ್ನು ಮಾನ್ಯ ಲೋಕ್ ಅದಾಲತ್ ನ್ಯಾಯಾಲಯವು ಬಹಳ ಗಂಭೀರವಾಗಿ ಪರಿಗಣಿಸಿದ್ದು, ನಗರಸ್ಥಳೀಯ ಸಂಸ್ಥೆಗಳು ಈ ಕುರಿತು ಕೂಡಲೇ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲು ಕೋರಿದೆ.

- ಸಾರ್ವಜನಿಕರು ಕಡ್ಡಾಯವಾಗಿ ಮೂಲದಲ್ಲಿಯೇ ತ್ಯಾಜ್ಯ ವಸ್ತುಗಳನ್ನು ಹಸಿಕಸ ಮತ್ತು ಒಣಕಸ ಎಂದು ಎರಡು ವಿಧಗಳಾಗಿ ವಿಂಗಡಿಸಿ ಪ್ರತ್ಯೇಕವಾಗಿ ಸಂಗ್ರಹಿಸಿಡಲು ಅಗತ್ಯ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು. ಸಾರ್ವಜನಿಕರನ್ನು ಉತ್ತೇಜಿಸಲು ಅಗತ್ಯವಿದ್ದಲ್ಲಿ ಎರಡು ಪ್ರತ್ಯೇಕ ಡಸ್ಟ್‌ಬಿನ್‌ಗಳನ್ನು ಮನೆ ಮನೆಗಳಿಗೆ ಒಂದು ಸಲ ಒದಗಿಸುವುದು ಹಾಗೂ ಬಹಳ ಮುಖ್ಯವಾಗಿ ವಿಂಗಡಿಸಿಡಲಾದ ತ್ಯಾಜ್ಯ ವಸ್ತುಗಳನ್ನು ಪ್ರತ್ಯೇಕವಾಗಿ ಸಂಗ್ರಹಿಸಲು ಸಾಗಿಸಲು ಹಾಗೂ ಪರಿಸರಕ್ಕೆ ಹಾನಿಯಾಗದ ರೀತಿಯಲ್ಲಿ ಸೂಕ್ತವಾಗಿ ವಿಲೇವಾರಿ ಮಾಡಲು ಕ್ರಮ ಕೈಗೊಳ್ಳುವುದು.
- ಪುನರ್ಬಳಕೆ ತ್ಯಾಜ್ಯ ವಸ್ತುಗಳನ್ನು ಸಂಗ್ರಹಿಸಲು, ಚಿಂದಿ ಆಯುವವರನ್ನು ಹಾಗೂ ಸ್ವಸಹಾಯ ಗುಂಪುಗಳನ್ನು ತೊಡಗಿಸಿಕೊಳ್ಳಲು ಅಗತ್ಯ ಕ್ರಮ ಕೈಗೊಳ್ಳುವುದು.
- ಪ್ಲಾಸ್ಟಿಕ್ ತ್ಯಾಜ್ಯ ವಸ್ತುಗಳ (ವ್ಯವಸ್ಥಾಪನೆ ಮತ್ತು ನಿರ್ವಹಣೆ) ನಿಯಮಗಳು 2011ರ ರೀತ್ಯಾ, ಪ್ಲಾಸ್ಟಿಕ್ ವಸ್ತುಗಳ ಉತ್ಪಾದಕರ ಸಹಯೋಗದೊಂದಿಗೆ ನಗರಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಪ್ಲಾಸ್ಟಿಕ್ ತ್ಯಾಜ್ಯ ವಸ್ತುಗಳ ಸಂಗ್ರಹಣಾ ಕೇಂದ್ರಗಳನ್ನು ಸ್ಥಾಪಿಸಲು ಹಾಗೂ ಸಂಗ್ರಹವಾಗುವ ಪ್ಲಾಸ್ಟಿಕ್ ತ್ಯಾಜ್ಯ ವಸ್ತುಗಳನ್ನು ಸೂಕ್ತವಾಗಿ ವಿಲೇವಾರಿ ಮಾಡಲು ಕ್ರಮ ಕೈಗೊಳ್ಳುವುದು.
- ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ ಶಾಲಾ–ಕಾಲೇಜುಗಳಲ್ಲಿ ಪ್ಲಾಸ್ಟಿಕ್ ತ್ಯಾಜ್ಯ ವಸ್ತುಗಳ ಸಂಗ್ರಹಣಾ ತೊಟ್ಟಿಗಳನ್ನು ಇಡಲು ಹಾಗೂ ಸಂಗ್ರಹವಾಗುವ ಪ್ಲಾಸ್ಟಿಕ್ ತ್ಯಾಜ್ಯ ವಸ್ತುಗಳನ್ನು ಸೂಕ್ತವಾಗಿ ವಿಲೇವಾರಿ ಮಾಡಲು ಕ್ರಮ ಕೈಗೊಳ್ಳುವುದು.

ಈ ಬಗ್ಗೆ ಜಿಲ್ಲಾ ನಗರಾಭಿವೃದ್ಧಿ ಕೋಶಗಳ ಯೋಜನಾ ನಿರ್ದೇಶಕರು, ತಮ್ಮ ಜಿಲ್ಲೆಯ ವ್ಯಾಪ್ತಿಯಲ್ಲಿರುವ ನಗರಸ್ಥಳೀಯ ಸಂಸ್ಥೆಗಳಿಗೆ ಅಗತ್ಯ ಸಹಾಯ ಮತ್ತು ಮಾರ್ಗದರ್ಶನಗಳನ್ನು ನೀಡಿ, ನಗರಸ್ಥಳೀಯ ಸಂಸ್ಥೆಗಳಲ್ಲಿ ಕೈಗೊಳ್ಳಲಾಗಿರುವ ಕ್ರಮಗಳ ಬಗ್ಗೆ ಪ್ರತಿ ತಿಂಗಳೂ ಪ್ರಗತಿ ಪರಿಶೀಲನಾ ಸಭೆ ನಡೆಸಿ, ಪೌರಾಡಳಿತ ನಿರ್ದೇಶನಾಲಯಕ್ಕೆ ಅನುಪಾಲನಾ ವರದಿಯನ್ನು ಸಲ್ಲಿಸಲು ಕೋರಿದೆ.

ತಮ್ಮ ವಿಶ್ವಾಸಿ
6/12
ಆಯುಕ್ತರು (ಪ್ರಭಾರ)
ಪೌರಾಡಳಿತ ನಿರ್ದೇಶನಾಲಯ
ಬೆಂಗಳೂರು.

ಪ್ರತಿಯನ್ನು;

1) ಮಾನ್ಯ ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ, ಬೆಂಗಳೂರುರವರ ಮಾಹಿತಿಗಾಗಿ ಸಲ್ಲಿಸಿದೆ.
2) ಎಲ್ಲಾ ಜಿಲ್ಲಾಧಿಕಾರಿಗಳಿಗೆ, ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
3) ನಿರ್ದೇಶಕರು, ರಾಜ್ಯ ನಗರಾಭಿವೃದ್ಧಿ ಸಂಸ್ಥೆ, ಆಡಳಿತ ತರಬೇತಿ ಸಂಸ್ಥೆಯ ಆವರಣ, ಲಲಿತಮಹಲ್ ರಸ್ತೆ, ಮೈಸೂರು–57001 ರವರ ಮಾಹಿತಿಗಾಗಿ.

ಸಂಸ್ಥೆಗಳು ಮೂಲದಲ್ಲಿಯೇ ತ್ಯಾಜ್ಯ ವಸ್ತುಗಳ ವಿಂಗಡಣೆ ಕುರಿತಾಗಿ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುವ ಬಗ್ಗೆ ನಿರ್ದೇಶನಗಳನ್ನು ನೀಡಲಾಗಿರುತ್ತದೆ. ಆದರೆ ಈ ಕುರಿತು ನಗರಸ್ಥಳೀಯ ಸಂಸ್ಥೆಗಳಲ್ಲಿ ಸಾಧಿಸಿರುವ ಪ್ರಗತಿ ನಿರಾಶಾದಾಯಕವಾಗಿರುತ್ತದೆ. ಇದನ್ನು ಮಾನ್ಯ ಲೋಕ್ ಅದಾಲತ್ ನ್ಯಾಯಾಲಯವು ಬಹಳ ಗಂಭೀರವಾಗಿ ಪರಿಗಣಿಸಿದ್ದು, ನಗರಸ್ಥಳೀಯ ಸಂಸ್ಥೆಗಳು ಈ ಕುರಿತು ಕೂಡಲೇ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲು ಕೋರಿದೆ.

- ಸಾರ್ವಜನಿಕರು ಕಡ್ಡಾಯವಾಗಿ ಮೂಲದಲ್ಲಿಯೇ ತ್ಯಾಜ್ಯ ವಸ್ತುಗಳನ್ನು ಹಸಿಕಸ ಮತ್ತು ಒಣಕಸ ಎಂದು ಎರಡು ವಿಧಗಳಾಗಿ ವಿಂಗಡಿಸಿ ಪ್ರತ್ಯೇಕವಾಗಿ ಸಂಗ್ರಹಿಸಿಡಲು ಅಗತ್ಯ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು. ಸಾರ್ವಜನಿಕರನ್ನು ಉತ್ತೇಜಿಸಲು ಅಗತ್ಯವಿದ್ದಲ್ಲಿ ಎರಡು ಪ್ರತ್ಯೇಕ ಡಸ್ಟ್‌ಬಿನ್‌ಗಳನ್ನು ಮನೆ ಮನೆಗಳಿಗೆ ಒಂದು ಸಲ ಒದಗಿಸುವುದು ಹಾಗೂ ಬಹಳ ಮುಖ್ಯವಾಗಿ ವಿಂಗಡಿಸಿಡಲಾದ ತ್ಯಾಜ್ಯ ವಸ್ತುಗಳನ್ನು ಪ್ರತ್ಯೇಕವಾಗಿ ಸಂಗ್ರಹಿಸಲು ಸಾಗಿಸಲು ಹಾಗೂ ಪರಿಸರಕ್ಕೆ ಹಾನಿಯಾಗದ ರೀತಿಯಲ್ಲಿ ಸೂಕ್ತವಾಗಿ ವಿಲೇವಾರಿ ಮಾಡಲು ಕ್ರಮ ಕೈಗೊಳ್ಳುವುದು.
- ಪುನರ್ಬಳಕೆ ತ್ಯಾಜ್ಯ ವಸ್ತುಗಳನ್ನು ಸಂಗ್ರಹಿಸಲು, ಚಿಂದಿ ಆಯುವವರನ್ನು ಹಾಗೂ ಸ್ವಸಹಾಯ ಗುಂಪುಗಳನ್ನು ತೊಡಗಿಸಿಕೊಳ್ಳಲು ಅಗತ್ಯ ಕ್ರಮ ಕೈಗೊಳ್ಳುವುದು.
- ಪ್ಲಾಸ್ಟಿಕ್ ತ್ಯಾಜ್ಯ ವಸ್ತುಗಳ (ವ್ಯವಸ್ಥಾಪನೆ ಮತ್ತು ನಿರ್ವಹಣೆ) ನಿಯಮಗಳು 2011ರ ರೀತ್ಯಾ, ಪ್ಲಾಸ್ಟಿಕ್ ವಸ್ತುಗಳ ಉತ್ಪಾದಕರ ಸಹಯೋಗದೊಂದಿಗೆ ನಗರಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಪ್ಲಾಸ್ಟಿಕ್ ತ್ಯಾಜ್ಯ ವಸ್ತುಗಳ ಸಂಗ್ರಹಣಾ ಕೇಂದ್ರಗಳನ್ನು ಸ್ಥಾಪಿಸಲು ಹಾಗೂ ಸಂಗ್ರಹವಾಗುವ ಪ್ಲಾಸ್ಟಿಕ್ ತ್ಯಾಜ್ಯ ವಸ್ತುಗಳನ್ನು ಸೂಕ್ತವಾಗಿ ವಿಲೇವಾರಿ ಮಾಡಲು ಕ್ರಮ ಕೈಗೊಳ್ಳುವುದು.
- ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ ಶಾಲಾ–ಕಾಲೇಜುಗಳಲ್ಲಿ ಪ್ಲಾಸ್ಟಿಕ್ ತ್ಯಾಜ್ಯ ವಸ್ತುಗಳ ಸಂಗ್ರಹಣಾ ತೊಟ್ಟಿಗಳನ್ನು ಇಡಲು ಹಾಗೂ ಸಂಗ್ರಹವಾಗುವ ಪ್ಲಾಸ್ಟಿಕ್ ತ್ಯಾಜ್ಯ ವಸ್ತುಗಳನ್ನು ಸೂಕ್ತವಾಗಿ ವಿಲೇವಾರಿ ಮಾಡಲು ಕ್ರಮ ಕೈಗೊಳ್ಳುವುದು.

ಈ ಬಗ್ಗೆ ಜಿಲ್ಲಾ ನಗರಾಭಿವೃದ್ಧಿ ಕೋಶಗಳ ಯೋಜನಾ ನಿರ್ದೇಶಕರು, ತಮ್ಮ ಜಿಲ್ಲೆಯ ವ್ಯಾಪ್ತಿಯಲ್ಲಿರುವ ನಗರಸ್ಥಳೀಯ ಸಂಸ್ಥೆಗಳಿಗೆ ಅಗತ್ಯ ಸಹಾಯ ಮತ್ತು ಮಾರ್ಗದರ್ಶನಗಳನ್ನು ನೀಡಿ, ನಗರಸ್ಥಳೀಯ ಸಂಸ್ಥೆಗಳಲ್ಲಿ ಕೈಗೊಳ್ಳಲಾಗಿರುವ ಕ್ರಮಗಳ ಬಗ್ಗೆ ಪ್ರತಿ ತಿಂಗಳೂ ಪ್ರಗತಿ ಪರಿಶೀಲನಾ ಸಭೆ ನಡೆಸಿ, ಪೌರಾಡಳಿತ ನಿರ್ದೇಶನಾಲಯಕ್ಕೆ ಅನುಪಾಲನಾ ವರದಿಯನ್ನು ಸಲ್ಲಿಸಲು ಕೋರಿದೆ.

ತಮ್ಮ ವಿಶ್ವಾಸಿ
6/2
ಆಯುಕ್ತರು (ಪ್ರಭಾರ)
ಪೌರಾಡಳಿತ ನಿರ್ದೇಶನಾಲಯ
ಬೆಂಗಳೂರು.

ಪ್ರತಿಯನ್ನು;

1) ಮಾನ್ಯ ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ, ಬೆಂಗಳೂರುರವರ ಮಾಹಿತಿಗಾಗಿ ಸಲ್ಲಿಸಿದೆ.
2) ಎಲ್ಲಾ ಜಿಲ್ಲಾಧಿಕಾರಿಗಳಿಗೆ, ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
3) ನಿರ್ದೇಶಕರು, ರಾಜ್ಯ ನಗರಾಭಿವೃದ್ಧಿ ಸಂಸ್ಥೆ, ಆಡಳಿತ ತರಬೇತಿ ಸಂಸ್ಥೆಯ ಆವರಣ, ಲಲಿತಮಹಲ್ ರಸ್ತೆ, ಮೈಸೂರು–57001 ರವರ ಮಾಹಿತಿಗಾಗಿ.